Akashvani : Bangalore
National Bulletin In Kannada
26.11.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

- ಇಂದು ದೇಶಾದ್ಯಂತ ಸಂವಿಧಾನ ದಿನ ಆಚರಣೆ
- ಸಂವಿಧಾನ ಅಂಗೀಕಾರದ ೭೫ನೇ ವರ್ಷಾಚರಣೆ ಅಂಗವಾಗಿ ಸಂಸತ್ ಉಭಯ ಸದನಗಳಲ್ಲಿ ವಿಶೇಷ ಕಲಾಪ ಆಯೋಜಿಸುವಂತೆ ಕಾಂಗ್ರೆಸ್ ಒತ್ತಾಯ
- ಮಣಿಪುರ ಹಿಂಸಾಚಾರ; ಸಮಗ್ರ ತನಿಖೆ ಆರಂಭಿಸಿದ ರಾಷ್ಟ್ರೀಯ ತನಿಖಾ ಸಂಸ್ಥೆ- ಎನ್ಐಎ
- ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಪಂದ್ಯಾವಳಿ; ಮುಂಬೈ- ಪಂಜಾಬ್ ತಂಡಗಳು ಮುಖಾಮುಖಿ

<><*<><>*><>

ಇಂದು ಸಂವಿಧಾನ ದಿನ. ಈ ವರ್ಷ ಸಂವಿಧಾನದ ಅಂಗೀಕಾರದ ೭೫ ನೇ ವಾರ್ಷಿಕೋತ್ಸವವನ್ನು ಗುರುತಿಸುತ್ತದೆ. ಈ ಹಿನ್ನೆಲೆಯಲ್ಲಿ ಇಂದಿನಿಂದ ೨೦೨೫ರ ನವೆಂಬರ್ ೨೬ ರವರೆಗೆ ಒಂದು ವರ್ಷಗಳ ಕಾಲ ವಿಶೇಷ ಆಚರಣೆಗಳನ್ನು ಸರ್ಕಾರ ಘೋಷಿಸಿದೆ. ೧೯೪೯ರ ನವೆಂಬರ್ ೨೬ ರಂದು ಭಾರತದ ಸಂವಿಧಾನ ಅಂಗೀಕಾರಗೊಂಡು, ೧೯೫೦ರ ಜನವರಿ ೨೬ ರಂದು ಜಾರಿಗೆ ಬಂತು. ದೆಹಲಿಯ ಸಂಸತ್ ಭವನದ ಸೆಂಟ್ರಲ್ ಹಾಲ್‌ನಲ್ಲಿ ಆಯೋಜಿಸಲಾಗಿರುವ ಭವ್ಯವಾದ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂಸತ್ತಿನ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದರು. ಇಂದು ನಾವು ಒಂದು ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಿದ್ದೇವೆ. ನಮ್ಮ ಸಂವಿಧಾನ ನಮ್ಮ ಪ್ರಜಾಸತ್ತಾತ್ಮಕ ಗಣರಾಜ್ಯದ ಸದೃಢ ಆಧಾರಸ್ತಂಭವಾಗಿದೆ. ಅದು ನಮ್ಮ ಸಾಮೂಹಿಕ ಮತ್ತು ವೈಯಕ್ತಿಕ ಸ್ವಾಭಿಮಾನವನ್ನು ಖಾತರಿಪಡಿಸುತ್ತದೆ. ರಾಷ್ಟ್ರದ ಪರವಾಗಿ ಸಂವಿಧಾನ ನಿರ್ಮಾಣದಲ್ಲಿ ಪಾತ್ರವಹಿಸಿದ ಎಲ್ಲರಿಗೂ ಶ್ರದ್ಧಾಂಜಲಿ ಅರ್ಪಿಸುತ್ತೇನೆ. ಈ ಸಂದರ್ಭ ಸಂವಿಧಾನ ಸಭೆಯ ೧೫ ಮಹಿಳಾ ಸದಸ್ಯರನ್ನು ಸ್ಮರಿಸುವ ಸುವರ್ಣ ಸಂದರ್ಭವೂ ಆಗಿದೆ. ಬರುವ ಜನವರಿಯಲ್ಲಿ ಗಣರಾಜ್ಯೋತ್ಸವ ೭೫ನೇ ವರ್ಷದ ಸಂಭ್ರಮಾಚರಣೆಯನ್ನು ಆಚರಿಸಲಿದ್ದು, ಇಂತಹ ಆಚರಣೆಗಳು ನಮ್ಮ ಇಲ್ಲಿನವರೆಗಿನ ಅವಲೋಕನ ಹಾಗೂ ಮುಂದಿನ ದಿನಗಳಲ್ಲಿ ಉತ್ತಮ ಯೋಜನೆಗಳನ್ನು ರೂಪಿಸಲು ಒಂದು ಉತ್ತಮ ಅವಕಾಶವನ್ನು ಒದಗಿಸುತ್ತದೆ ಎಂದರು. ಈ ವೇಳೆ, ಉಪರಾಷ್ಟ್ರಪತಿ ಜಗದೀಪ್ ಧನಕರ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಸಮಾರಂಭದಲ್ಲಿ ಭಾಗವಹಿಸಿದ್ದರು. ಅಲ್ಲದೆ, ಕೇಂದ್ರ ಸಚಿವರು, ಸಂಸದರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಇದೇ ವೇಳೆ, ಸಂವಿಧಾನ ನಿರ್ಮಾಣ ಹಾಗೂ ಇಲ್ಲಿಯವರೆಗಿನ ಹಾದಿಯ ಕುರಿತು ಸಾಕ್ಷ್ಯಚಿತ್ರ ಪ್ರದರ್ಶಿಸಲಾಯಿತು. ಭಾರತ ಸಂವಿಧಾನವನ್ನು ಅಂಗೀಕರಿಸಿದ ೭೫ ನೇ ವಾರ್ಷಿಕೋತ್ಸವದ ಸ್ಮರಣಾರ್ಥ ನಾಣ್ಯ ಮತ್ತು ಅಂಚೆಚೀಟಿಯನ್ನು ಬಿಡುಗಡೆಗೊಳಿಸಿದರು. ಇದೇ ವೇಳೆ, "ಮೇಕಿಂಗ್ ಆಫ್ ದಿ ಕಾನ್‌ಸ್ಟಿಟ್ಯೂಷನ್ ಆಫ್ ಇಂಡಿಯಾ: ಎ ಗ್ಲಿಂಪ್ಸ್" ಮತ್ತು "ಮೇಕಿಂಗ್ ಆಫ್ ದಿ ಕಾನ್‌ಸ್ಟಿಟ್ಯೂಷನ್ ಆಫ್ ಇಂಡಿಯಾ ಅಂಡ್ ಇಟ್ಸ್ ಗ್ಲೋರಿಯಸ್ ಜರ್ನಿ" ಶೀರ್ಷಿಕೆಯ

ಪುಸ್ತಕಗಳನ್ನು, ಹಾಗೆಯೇ, ವಿಶೇಷವಾಗಿ, ಸಂವಿಧಾನವನ್ನು ಸಂಸ್ಕೃತ ಮತ್ತು ಮೈಥಿಲಿ ಭಾಷೆಗಳಲ್ಲಿ ಬಿಡುಗಡೆ ಮಾಡಲಾಯಿತು. ಸುಪ್ರೀಂಕೋರ್ಟ್ ಆವರಣದಲ್ಲಿ ಇಂದು ಸಂಜೆ ಆಯೋಜಿಸಿದ್ದ ಸಂವಿಧಾನ ದಿನ ಸಂಭ್ರಮಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿಯಾಗಿದ್ದರು. ಈ ವೇಳೆ ಅವರು, ಭಾರತೀಯ ನ್ಯಾಯಾಂಗದ ೨೦೨೩-೨೪ನೇ ಸಾಲಿನ ವಾರ್ಷಿಕ ವರದಿಯನ್ನು ಬಿಡುಗಡೆಗೊಳಿಸಿದರು. ೨೦೧೫ರಿಂದ ಪ್ರತಿ ವರ್ಷ ನವೆಂಬರ್ ೨೬ ಅನ್ನು ಸಂವಿಧಾನ ದಿನವನ್ನಾಗಿ ಆಚರಿಸಲಾಗುತ್ತಿದೆ.

<><*<><>*><>

ಸಂವಿಧಾನ ಜಾರಿಯ ೭೫ನೇ ವರ್ಷಾಚರಣೆ ಅಂಗವಾಗಿ ಸಂಸತ್‌ನ ಎರಡೂ ಸದನಗಳಲ್ಲಿ ವಿಶೇಷ ಕಲಾಪ ಆಯೋಜಿಸುವಂತೆ ಕಾಂಗ್ರೆಸ್ ಒತ್ತಾಯಿಸಿದೆ. ಸಂಸತ್ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಈ ಸಂಬಂಧ ರಾಜ್ಯಸಭಾ ಸಭಾಪತಿ ಅವರಿಗೆ ಮನವಿ ಮಾಡಲಾಗಿದೆ. ಸಂವಿಧಾನ ಮತ್ತು ಅದರ ಪ್ರಾಮುಖ್ಯತೆ ಕುರಿತು ಎರಡು ದಿನಗಳ ಚರ್ಚೆ ಅಗತ್ಯ ಎಂದು ಪ್ರತಿಪಾದಿಸಿದರು. ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್ ಮಾತನಾಡಿ, ಸಂವಿಧಾನವು ಜನರಿಗೆ ಹಕ್ಕನ್ನು ನೀಡಿದೆ ಮತ್ತು ಹೇಗೆ ಮುಂದುವರಿಯಬೇಕು ಎಂದು ತೋರಿಸಿಕೊಟ್ಟಿದೆ. ಸಂವಿಧಾನದ ಮಾರ್ಗದಲ್ಲಿ ನಡೆಯುವ ಮೂಲಕ ನಾವು ನಿಜವಾದ ಸಂಭ್ರಾಮಚಾರಣೆ ಮಾಡಬಹುದಾಗಿದೆ ಎಂದು ಹೇಳಿದರು. ಇನ್ನೊಂದೆಡೆ, ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್ ಮಾತನಾಡಿ, ಸಂವಿಧಾನ ಅಪಾಯದಲ್ಲಿದೆ ಎಂದು ಬಿಂಬಿಸಲು ಪ್ರತಿಪಕ್ಷಗಳು ಪ್ರಯತ್ನಿಸುತ್ತಿವೆ. ಆದರೆ, ಜನರಿಂದ ಈ ಪಕ್ಷಗಳನ್ನು ತ್ಯಜಿಸಲ್ಪಟ್ಟಿವೆ. ನಮ್ರತೆಯಿಂದ ಚುನಾವಣೆ ಸೋಲನ್ನು ಪ್ರತಿಪಕ್ಷಗಳು ಒಪ್ಪಿಕೊಳ್ಳಬೇಕು ಎಂದು ಪ್ರತಿಪಾದಿಸಿದರು.

<><*<><>*><>

ಮಹಾರಾಷ್ಟ್ರ ಮುಖ್ಯಮಂತ್ರಿ ಏಕ್‌ನಾಥ್ ಶಿಂಧೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇಂದು ಅವರು ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್ ಮತ್ತು ಅಜಿತ್ ಪವಾರ್ ಅವರೊಂದಿಗೆ ರಾಜಭವನಕ್ಕೆ ತೆರಳಿ ರಾಜೀನಾಮೆ ಪತ್ರವನ್ನು ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಅವರಿಗೆ ಸಲ್ಲಿಸಿದರು. ಮುಂದಿನ ಮುಖ್ಯಮಂತ್ರಿ ಪ್ರಮಾಣವಚನ ಸ್ವೀಕಾರವರೆಗೆ ಏಕ್‌ನಾಥ್ ಶಿಂಧೆ ಅವರೇ ಹಂಗಾಮಿ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ. ಮುಂದಿನ ಮಹಾರಾಷ್ಟ್ರ ಮುಖ್ಯಮಂತ್ರಿ ಯಾರಾಗಲಿದ್ದಾರೆ ಎಂಬುದರ ಕುರಿತು ಬಿಜೆಪಿ, ಶಿವಸೇನೆ ಮತ್ತು ಎನ್‌ಸಿಪಿ ಪಕ್ಷಗಳ ನಡುವೆ ಪೈಪೋಟಿ ಏರ್ಪಟ್ಟಿದೆ.

<><*<><>*><>

ಸದಸ್ಯರ ರಾಜೀನಾಮೆಯಿಂದ ತೆರವಾಗಿದ್ದ ರಾಜ್ಯಸಭೆಯ ಆರು ಸ್ಥಾನಗಳಿಗೆ ಕೇಂದ್ರ ಚುನಾವಣಾ ಆಯೋಗ ಉಪಚುನಾವಣೆ ದಿನಾಂಕ ಪ್ರಕಟಿಸಿದೆ. ಆಂಧ್ರಪ್ರದೇಶದ ೩, ಒಡಿಶಾ, ಪಶ್ಚಿಮ ಬಂಗಾಳ ಹಾಗೂ ಹರಿಯಾಣದ ತಲಾ ಒಂದು ರಾಜ್ಯಸಭಾ ಸ್ಥಾನಗಳಿಗೆ ಡಿಸೆಂಬರ್ ೨೦ರಂದು ಉಪಚುನಾವಣೆ ನಡೆಯಲಿದೆ. ಉಪಚುನಾವಣೆಯ ಸಂಬಂಧ ಡಿಸೆಂಬರ್ ೩ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ಉಮೇದುವಾರಿಕೆ ಸಲ್ಲಿಸಲು ಡಿಸೆಂಬರ್ ೧೦ ಕಡೆಯ ದಿನವಾಗಿದೆ. ಡಿಸೆಂಬರ್ ೧೧ ರಂದು ನಾಮಪತ್ರಗಳ ಪರಿಶೀಲನೆ

ಹಾಗೂ ನಾಮಪತ್ರ ವಾಪಸ್ ಪಡೆಯಲು ಡಿಸೆಂಬರ್ ೧೩ ರಂದು ಅಂತಿಮ ದಿನವಾಗಿದೆ. ಡಿಸೆಂಬರ್ ೨೦ರಂದು ಬೆಳಗ್ಗೆ ೮ರಿಂದ ಸಂಜೆಯ ೪ರವರೆಗೆ ಮತದಾನ ನಡೆಯಲಿದ್ದು, ಅಂದು ಸಂಜೆ ೫ ಗಂಟೆಯಿಂದಲೇ ಮತ ಎಣಿಕೆ ಆರಂಭವಾಗಲಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

<><*<><>*><>

ಮಣಿಪುರದಲ್ಲಿ ನಡೆದ ಇತ್ತೀಚಿನ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ-ಎನ್‌ಐಎ, ಇಂದು ಮೂರು ಪ್ರಮುಖ ಪ್ರಕರಣಗಳ ಸಮಗ್ರ ತನಿಖೆಯನ್ನು ಆರಂಭಿಸಿದೆ. ಅಪರಾಧಗಳ ಗಂಭೀರತೆಯನ್ನು ಪರಿಗಣಿಸಿ ಗೃಹ ಸಚಿವಾಲಯ ಪ್ರಕರಣಗಳನ್ನು ಎನ್‌ಐಎ ಗೆ ಹಸ್ತಾಂತರಿಸಿತು. ಭಾರತೀಯ ನ್ಯಾಯ ಸಂಹಿತಾ, ಶಸ್ತ್ರಾಸ್ತ್ರ ಕಾಯ್ದೆ ಮತ್ತು ಕಾನೂನುಬಾಹಿರ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಈ ತಿಂಗಳ ೧೩ ರಂದು ಎನ್‌ಐಎ ಪ್ರಕರಣ ದಾಖಲಿಸಿತು. ಎನ್‌ಐಎ ತಂಡಗಳು ಈ ತಿಂಗಳ ೨೧ ಮತ್ತು ೨೨ ರಂದು ಸ್ಥಳಗಳಿಗೆ ಭೇಟಿ ನೀಡಿತು. ಪ್ರಸ್ತುತ ಪ್ರಕರಣದ ದಾಖಲೆಗಳನ್ನು ಸ್ಥಳೀಯ ಪೊಲೀಸರಿಂದ ಎನ್‌ಐಎಗೆ ಹಸ್ತಾಂತರಿಸುವ ಪ್ರಕ್ರಿಯೆ ನಡೆಯುತ್ತಿದೆ.

<><*<><>*><>

ನವದೆಹಲಿಯಲ್ಲಿ ಅಂತಾರಾಷ್ಟ್ರೀಯ ಸಹಕಾರ ಒಕ್ಕೂಟ-ಐಸಿಎ ಜಾಗತಿಕ ಸಹಕಾರ ಸಮ್ಮೇಳನ ನಡೆಯುತ್ತಿದೆ. ನವದೆಹಲಿಯ ಭಾರತ ಮಂಟಪಂನಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರು ಸಮ್ಮೇಳನವನ್ನು ಉದ್ಘಾಟಿಸಿದರು. ಸಹಕಾರ ಸಂಘಗಳು ಎಲ್ಲರಿಗೂ ಸಾಮೂಹಿಕ, ಶಾಂತಿಯುತ ಮತ್ತು ಸಮೃದ್ಧ ಭವಿಷ್ಯವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವಹಿಸಲಿ ಎಂಬುದು ಸಮ್ಮೇಳನದ ಮುಖ್ಯ ಧ್ಯೇಯವಾಕ್ಯವಾಗಿದೆ. ಐಸಿಎ ಅನ್ನು ೧೮೯೫ರಲ್ಲಿ ಸ್ಥಾಪಿಸಲಾಯಿತು. ಇದು ಒಂದು ಶತಕೋಟಿಗೂ ಹೆಚ್ಚು ಸಹಕಾರಿ ಸದಸ್ಯರನ್ನು ಹೊಂದಿದೆ. ಇಂದು ವಿಶ್ವದ ಶೇಕಡ ೨೫ ರಷ್ಟು ಸಹಕಾರಿ ಸಂಸ್ಥೆಗಳು ಭಾರತದ್ದಾಗಿವೆ. ದೇಶವು ಸಹಕಾರಿ ಚಳುವಳಿಯಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮಿದೆ. ಐದು ದಿನಗಳ ಸಮ್ಮೇಳನವು ಪ್ರಪಂಚದಾದ್ಯಂತದ ಸಹಕಾರಿಗಳನ್ನು ಒಟ್ಟುಗೂಡಿಸಿದೆ. ಕಾರ್ಯಕ್ರಮದಲ್ಲಿ ಸುಮಾರು ಮೂರು ಸಾವಿರ ವಿದೇಶಿ ಮತ್ತು ಭಾರತೀಯ ಪ್ರತಿನಿಧಿಗಳು ಭಾಗಿಯಾಗಿದ್ದಾರೆ.

<><*<><>*><>

ಸಾರ್ವಜನಿಕ ಸೇವಾ ವಿತರಣೆಯನ್ನು ಸುಧಾರಿಸಲು ಸರ್ಕಾರವು ಜಿಯೋಸ್ಪೇಷಿಯಲ್ ಮಾಹಿತಿಯನ್ನು ಬಳಸುತ್ತಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯ ಭಾರತ್ ಮಂಟಪದಲ್ಲಿಂದು ೧೩ನೇ ವಿಶ್ವಸಂಸ್ಥೆಯ ಗ್ಲೋಬಲ್ ಜಿಯೋಸ್ಪೇಷಿಯಲ್ ಮಾಹಿತಿ ನಿರ್ವಹಣೆ, ಏಷ್ಯಾ-ಪೆಸಿಫಿಕ್ ಪ್ಲೀನರಿ ಮತ್ತು ಪ್ರಾದೇಶಿಕ ಸಮ್ಮೇಳನ ಉದ್ದೇಶಿಸಿ ಅವರು ಮಾತನಾಡಿದರು. ಜಿಯೋಸ್ಪೇಷಿಯಲ್ ವಲಯದಲ್ಲಿ ಸುಧಾರಣೆಗಳನ್ನು ತರಲು ಸರ್ಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ ಮತ್ತು ರಾಷ್ಟ್ರೀಯ ಭೂಗೋಳಿಕ ನೀತಿಯನ್ನು ತಂದಿದೆ ಎಂದರು. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ಏಷ್ಯಾ ಪೆಸಿಫಿಕ್ ಪ್ರದೇಶದ ಭೌಗೋಳಿಕ ಸಾಮರ್ಥ್ಯಗಳನ್ನು ಬಲಪಡಿಸಲು ಬದ್ಧವಾಗಿದೆ ಎಂದು ಡಾ.ಜಿತೇಂದ್ರ ಸಿಂಗ್ ಹೇಳಿದರು. ಈ ನಾಲ್ಕು ದಿನಗಳ ಸಮ್ಮೇಳನದಲ್ಲಿ ೩೦ ದೇಶಗಳ ೮೦ ಅಂತಾರಾಷ್ಟ್ರೀಯ ಪ್ರತಿನಿಧಿಗಳು, ಭಾರತದ

೧೨೦ ಪ್ರತಿನಿಧಿಗಳು ಭಾಗವಹಿಸಿದ್ದಾರೆ. ಈ ಸಮ್ಮೇಳನವು ಉದಯೋನ್ಮುಖ ಜಿಯೋಸ್ಪೇಷಿಯಲ್ ತಂತ್ರಜ್ಞಾನಗಳು ಮತ್ತು ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಜಿಯೋಸ್ಪೇಷಿಯಲ್ ಮಾಹಿತಿಯ ಬಳಕೆಯನ್ನು ಹೆಚ್ಚಿಸಲು ಪ್ರಾದೇಶಿಕ ಕಾರ್ಯತಂತ್ರಗಳ ರಚನೆಗೆ ಪ್ರಮುಖ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ.

<><*<><>*><>

ಗೋವಾದಲ್ಲಿ ನಡೆಯುತ್ತಿರುವ ೫೫ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ೬ನೇ ದಿನವಾದ ಇಂದು ೭೦ ಚಲನಚಿತ್ರಗಳು ಪ್ರದರ್ಶನಗೊಳ್ಳುತ್ತಿವೆ. ಚಿತ್ರಮಂದಿರ ಪ್ರದರ್ಶನಗಳ ಜೊತೆಗೆ ಈ ಬಾರಿ ಬಯಲು ಪ್ರದರ್ಶನಗಳನ್ನು ಆಯೋಜಿಸಲಾಗಿದೆ. ಈ ಬಾರಿ ಮೈಗ್ರೇಷನ್, ಬ್ರಹ್ಮಾಸ್ತ್ರ ಪಾರ್ಟ್ ಒನ್ ಮತ್ತು ಸಿಕ್ರೇಟ್ ಲೈಫ್ ಆಫ್ ಪೆಟ್ಸ್-೨ ಚಲನಚಿತ್ರಗಳ ಪ್ರದರ್ಶನಕ್ಕೆ ನಗರದ ವಿವಿಧ ಬೀಚ್‌ಗಳಲ್ಲಿ ವ್ಯವಸ್ಥೆ ಮಾಡಲಾಗಿದೆ. ಆರ್ಟಿಕಲ್ ೩೭೦ ಸಿನಿಮಾ ಪ್ರದರ್ಶನದ ಜೊತೆಗೆ ಸಂಜೆ ಖ್ಯಾತ ಸಂಗೀತಗಾರರಿಂದ ಸಂಗೀತ ಸಂಜೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

<><*<><>*><>

ಮಹಾರಾಷ್ಟ್ರ ಮುಖ್ಯಮಂತ್ರಿ ಏಕ್‌ನಾಥ್ ಶಿಂಧೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇಂದು ಅವರು ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನಿವೀಸ್ ಮತ್ತು ಅಜಿತ್ ಪವಾರ್ ಅವರೊಂದಿಗೆ ರಾಜಭವನಕ್ಕೆ ತೆರಳಿ ರಾಜೀನಾಮೆ ಪತ್ರವನ್ನು ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಅವರಿಗೆ ಸಲ್ಲಿಸಿದರು. ಮುಂದಿನ ಮುಖ್ಯಮಂತ್ರಿ ಪ್ರಮಾಣವಚನ ಸ್ವೀಕಾರವರೆಗೆ ಏಕ್‌ನಾಥ್ ಶಿಂಧೆ ಅವರೇ ಹಂಗಾಮಿ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ. ಮುಂದಿನ ಮಹಾರಾಷ್ಟ್ರ ಮುಖ್ಯಮಂತ್ರಿ ಯಾರಾಗಲಿದ್ದಾರೆ ಎಂಬುದರ ಕುರಿತು ಬಿಜೆಪಿ, ಶಿವಸೇನೆ ಮತ್ತು ಎನ್‌ಸಿಪಿ ಪಕ್ಷಗಳ ನಡುವೆ ಪೈಪೋಟಿ ಏರ್ಪಟ್ಟಿದೆ.

<><*<><>*><>

ಕೇಂದ್ರ ಸರ್ಕಾರವು ಹದಿನೈದು ರಾಜ್ಯಗಳಿಗೆ ವಿಪತ್ತು ನಿರ್ವಹಣೆ ಮತ್ತು ಸಾಮರ್ಥ್ಯ ನಿರ್ಮಾಣ ಯೋಜನೆಗಳಿಗಾಗಿ ಒಂದು ಸಾವಿರದ ೧೧೫ ಕೋಟಿ ರೂಪಾಯಿಗಳನ್ನು ಅನುಮೋದಿಸಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯು ಈ ನಿಧಿಗೆ ಅನುಮೋದನೆ ನೀಡಿದೆ. ಎಂಟು ಈಶಾನ್ಯ ರಾಜ್ಯಗಳಿಗೆ ೩೭೮ ಕೋಟಿ ರೂಪಾಯಿ, ಉತ್ತರಾಖಂಡ ಮತ್ತು ಹಿಮಾಚಲ ಪ್ರದೇಶಕ್ಕೆ ತಲಾ ೧೪೨ ಕೋಟಿ ರೂಪಾಯಿ, ಮಹಾರಾಷ್ಟ್ರಕ್ಕೆ ನೂರು ಕೋಟಿ ರೂಪಾಯಿ, ಕರ್ನಾಟಕ ಮತ್ತು ಕೇರಳಕ್ಕೆ ತಲಾ ೭೨ ಕೋಟಿ ರೂಪಾಯಿ ಮತ್ತು ತಮಿಳುನಾಡು ಮತ್ತು ಪಶ್ಚಿಮ ಬಂಗಾಳಕ್ಕೆ ತಲಾ ೫೦ ಕೋಟಿ ರೂಪಾಯಿಗಳನ್ನು ಸಮಿತಿ ಅನುಮೋದಿಸಿದೆ. ಉನ್ನತ ಮಟ್ಟದ ಸಮಿತಿಯು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಒಟ್ಟು ೧೧೫ ಕೋಟಿ ರೂಪಾಯಿಗಳ ವೆಚ್ಚದಲ್ಲಿ ನಾಗರಿಕ ರಕ್ಷಣೆಯ ತರಬೇತಿ ಮತ್ತು ಸಾಮರ್ಥ್ಯ ನಿರ್ಮಾಣಕ್ಕಾಗಿ ಮತ್ತೊಂದು ಯೋಜನೆಯನ್ನು ಅನುಮೋದಿಸಿದೆ. ದೇಶದಲ್ಲಿ ವಿಪತ್ತು ಅಪಾಯ ಕಡಿತ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ವಿಪತ್ತುಗಳ ಸಮಯದಲ್ಲಿ ಯಾವುದೇ ವ್ಯಾಪಕವಾದ ಜೀವ ಮತ್ತು ಆಸ್ತಿ ನಷ್ಟವನ್ನು ತಡೆಗಟ್ಟಲು ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಈ ವರ್ಷದಲ್ಲಿ ಈಗಾಗಲೇ ೨೧ ಸಾವಿರದ ೪೭೬ ಕೋಟಿ ರೂಪಾಯಿಗಳನ್ನು ರಾಜ್ಯಗಳಿಗೆ ಬಿಡುಗಡೆ ಮಾಡಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಮುಂಬೈ ಫುಟ್‌ಬಾಲ್ ಅರೇನಾದಲ್ಲಿಂದು ನಡೆಯುತ್ತಿರುವ ಇಂಡಿಯನ್ ಸೂಪರ್ ಲೀಗ್ ಫುಟ್‌ಬಾಲ್ ಟೂರ್ನಿಯ ಪಂದ್ಯದಲ್ಲಿ ಮುಂಬೈ ಸಿಟಿ ಫುಟ್‌ಬಾಲ್ ಕ್ಲಬ್, ಪಂಜಾಬ್ ಫುಟ್‌ಬಾಲ್ ಕ್ಲಬ್ ತಂಡವನ್ನು ಎದುರಿಸುತ್ತಿದ್ದು, ಪಂದ್ಯ ಪ್ರಗತಿಯಲ್ಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>